159ರಿ೦ (81)

<u>ಶ್ರೀ ಬಸನಗೌಡ ಬಾದರ್ಲಿ, ಮಾನ್ಯ ವಿಧಾನ ಪರಿಷತ್ತಿನ ಸದಸ್ಯರು (ವಿಧಾನಸಭೆ ಚುನಾವಣಾ ಕ್ಷೇತ್ರ) ಇವರು ನಿಯಮ 72ರ ಮೇರೆಗೆ ನೀಡಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ</u>

ಪ್ರಶ್ನೆ:ರಾಯಚೂರು ಜಿಲ್ಲೆಯ ಸಿಂಧನೂರು, ಮಸ್ಕಿ ಹಾಗೂ ಲಿಂಗಸಗೂರು ತಾಲ್ಲೂಕುಗಳನ್ನು ಒಳಗೊಂಡಂತೆ ಸಿಂಧನೂರು ತಾಲ್ಲೂಕಿನಲ್ಲಿ ನೂತನ 'ಪ್ರಾದೇಶಿಕ ಸಾರಿಗೆ ಆಯುಕ್ತರ ಕಛೇರಿ'ಯನ್ನು ತೆರೆಯುವ ಕುರಿತು ಮಾನ್ಯ ಸಾರಿಗೆ ಸಚಿವರ ಗಮನಸೆಳೆಯ ಬಯಸುತ್ತೇನೆ.

**ಉತ್ತರ**: ರಾಯಚೂರು ಜಿಲ್ಲೆಯ ಸಿಂಧನೂರು ತಾಲ್ಲೂಕಿನಲ್ಲಿ ಹೊಸದಾಗಿ ಪ್ರಾದೇಶಿಕ ಸಾರಿಗೆ ಕಛೇರಿಯನ್ನು ಪ್ರಾರಂಭಿಸುವ ಪ್ರಸ್ತಾವನೆಗೆ ಆರ್ಥಿಕ ಇಲಾಖೆಯು ಸಹಮತಿಸಿರುವುದಿಲ್ಲ. ಪ್ರಸ್ತುತ, ಸಾರ್ವಜನಿಕರಿಗೆ ಅವರುಗಳ ವಾಹನ ಅನುಜ್ಞಾ ಪತ್ರ ಮತ್ತು ವಾಹನ ನೋಂದಣಿಯ ಸ್ಮಾರ್ಟ್ ಕಾರ್ಡ್‌ಗಳನ್ನು ಅವರ ಮನೆಯ ವಿಳಾಸಗಳಿಗೆ ಅಂಚೆ ಸೇವೆಯ ಮೂಲಕ ತಲುಪಿಸಲಾಗುತ್ತಿದೆ. ಇಲಾಖೆಯಲ್ಲಿ ವಾಹನ್-4, ಸಾರಥಿ-4 ಮತ್ತು ಇ-ಪೇಮೆಂಟ್ ಆಫ್ ಟ್ಯಾಕ್ಸ್ ನಂತಹ ಆನ್‌ಲೈನ್ ಸೇವೆಗಳನ್ನು ರಾಜ್ಯದ ಎಲ್ಲಾ ಕಛೇರಿಗಳಲ್ಲಿ ಜಾರಿಗೆ ತರಲಾಗಿದೆ ಹಾಗೂ ಸಾರ್ವಜನಿಕರು ಕರ್ನಾಟಕ 1, ಬೆಂಗಳೂರು-1 ಮತ್ತು ಮೊಬೈಲ್-1 ಎಂಬ ಆ ್ಯಯಪ್‌ಗಳಲ್ಲಿ ವಾಹನ ವಿವರ/ಮಾಹಿತಿಗಳನ್ನು ಪಡೆಯಬಹುದಾಗಿರುತ್ತದೆ.

ಮುಂದುವರೆದು, ಸಿಂಧನೂರು ತಾಲ್ಲೂಕಿನ ಸಾರ್ವಜನಿಕರ ಅನುಕೂಲಕ್ಕಾಗಿ ಪ್ರತಿ ಮಾಹೆಯ ಕೊನೆಯ ಗುರುವಾರದಂದು ಸಾರಿಗೆ ಶಿಬಿರವನ್ನು ನಡೆಸಲಾಗುತ್ತಿದೆ. ಈ ಹಿನ್ನೆಲೆಯಲ್ಲಿ, ಸಿಂಧನೂರು ತಾಲ್ಲೂಕಿನಲ್ಲಿ ಹೊಸ ಪ್ರಾದೇಶಿಕ ಸಾರಿಗೆ ಕಛೇರಿಯನ್ನು ತೆರೆಯುವ ಪ್ರಸ್ತಾವನೆ ಪ್ರಸ್ತುತ ಸರ್ಕಾರದ ಮುಂದಿರುವುದಿಲ್ಲ.

ಟಿಡಿ 77 ಟಿಡಿಕ್ಯೂ 2026

**(ಬಿ.ಎಸ್. ಸುರೇಶ)**
ಸಾರಿಗೆ ಸಚಿವರು.



File No. TD/77/TDQ/2026-DO-Trans (Computer No. 2273382)